ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೊಟ್ಟಿಗೆರೆ ವಾರ್ಡ್ ಸಂಖ್ಯೆ-194.

ವಾರ್ಡ್ ಕಛೇರಿಯಲ್ಲಿ ದಿನಾಂಕ: 21-10-2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

| ಹಾಜರಿದ್ದವರು |
| --- |
| 1. ಅಧ್ಯಕ್ಷರು, ಗೊಟ್ಟಿಗೆರೆ, ವಾರ್ಡ್ ಸಮಿತಿ, ಬೊಮ್ಮನಹಳ್ಳಿ, ಬೆಂಗಳೂರು.<br>2. ಹಿರಿಯ ಆರೋಗ್ಯ ಪರಿವೀಕ್ಷಕರು ಹಾಗೂ ಕಾರ್ಯದರ್ಶಿ, ವಾರ್ಡ್ ನಂ.194, ಗೊಟ್ಟಿಗೆರೆ.<br>3. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ), ಗೊಟ್ಟಿಗೆರೆ.<br>4. ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ)<br>5. ವಾರ್ಡ್ ಸಹಾಯಕ ಅಭಿಯಂತರರು ವಾರ್ಡ್ ನಂ.194, ಗೊಟ್ಟಿಗೆರೆ<br>6. ಸಹಾಯಕ ಕಂದಾಯ ಅಧಿಕಾರಿಗಳು ಅಂಜನಾಪುರ ಉಪ ವಲಯ<br>7. ಪಶುಸಂಗೋಪನ ಪರಿವೀಕ್ಷಕರು ಬೊಮ್ಮನಹಳ್ಳಿ ವಲಯ<br>8. ಸಹಾಯಕ ಕಾರ್ಯಪಾಲಕ ಅಭಿಯಂತರು ಅಂಜನಾಪುರ ಉಪ ವಿಭಾಗ<br>9. ತೋಟಗಾರಿಗೆ ಇಲಾಖೆಯ ಸಹಾಯಕರು<br>10. ಅರಣ್ಯ ವಲಯ ಅಧಿಕಾರಿಗಳು<br>11. ಸಹಾಯಕ ಕಾರ್ಯಪಾಲಕ ಅಭಿಯಂತರು (ರಾಜ ಕಾಲುವೆ)<br>12. ಸಹಾಯಕ ಕಾರ್ಯಪಾಲಕ ಅಭಿಯಂತರು (ಬಿದೀ ದಿಪ ನಿರ್ವಹಣೇ)<br>13. ಸಹಾಯಕ ಅಭಿಯಂತರು ಬಿ ಡಬ್ಲ್ಯೂ ಎಸ್ ಎಸ್ ಬಿ<br>14. ಸಹಾಯಕ ಅಭಿಯಂತರು ಬಿ ಡಬ್ಲ್ಯೂ ಎಸ್ ಎಸ್ ಬಿ<br>15. ವೈದ್ಯಾಧಿಕಾರಿಗಳು ಪ್ರಾಥಮಿಕ ಅರೋಗ್ಯ ಕೇಂದ್ರ ಗೊಟ್ಟಿಗೆರೆ<br><br>ಸ್ಥಳೀಯ ಸಂಘ ಸದಸ್ಯರು: -<br><br>1. ಅಧ್ಯಕ್ಷರು, ಪರಿವರ್ತನ ಸಂಘ, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ.<br>2. ಅಧ್ಯಕ್ಷರು, ಕ್ಲಾಸಿಕ್ ಆರ್ಚರ್ಡ್ಸ್, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ.<br>3. ಜೀ ಎಸ್ ರಾವ್ ಎಚ್ ಎಂ ವರ್ಲ್ಡ್ ಸಿಟ್ಟಿ<br>4. ಜೀ ಅರ್ ಪವನ್ ಕುಮಾರ್<br>5. ಫರೋಜ್ ಭೈಯಿ ಮಹಮದ್ ಬೋರ ಲೇಔಟ್<br>6. ಗಿರಿ ಪ್ರಸಾದ್ ಬೋರ ಲೇಔಟ್ |

ದಿನಾಂಕ: 21-10-2021 ರಂದು ಮಧ್ಯಾಹ್ನ 11:30 ಘಂಟೆಗೆ ನಡೆಸಲಾದ ವಾರ್ಡ್ ಸಮಿತಿ ಸಭೆಯಲ್ಲಿ ಅಧ್ಯಕ್ಷರು ರವರು ಸಭೆಯಲ್ಲಿ ಎಲ್ಲರನ್ನು ಸ್ವಾಗತಿಸುತ್ತಾ, ಸಭೆಯಲ್ಲಿ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

1. **ಕೋವಿಡ್-19 ಸಂಬಂಧ ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತ ಬಗ್ಗೆ.**

   (I) ಗೊಟ್ಟಿಗೆರೆ ವಾರ್ಡ್ ವ್ಯಾಪ್ತಿಯಲ್ಲಿ ಸದರಿ ಒಟ್ಟು 11 ಕೋವಿಡ್ ಪ್ರಕರಣಗಳು ಕಂಡುಬಂದಿದ್ದು, ಒಟ್ಟು 6 ಪರೀಕ್ಷಾ ತಂಡಗಳು ಕರ್ತವ್ಯ ನಿರ್ವಹಿಸಿದ್ದು ಹಾಗೂ ಮೈಕ್ರೋ ಕಂಟೈನ್‌ಮೆಂಟ್ 01 ಪ್ರದೇಶದಲ್ಲಿ ಕಂಡುಬಂದಿದ್ದು, ಸಮೀಕ್ಷಾ ಕಾರ್ಯ ನಡೆಸಿ ತಪಾಸಣೆ ನಡೆಸಲಾಗಿರುವ ಬಗ್ಗೆ ಸಭೆಗೆ ತಿಳಿಸಿದರು,

Scanned by CamScanner

(II) ವಾರ್ಡ್ ವ್ಯಾಪ್ತಿಯಲ್ಲಿ 45 ವರ್ಷ ಮೇಲ್ಪಟ್ಟ ಸಾರ್ವಜನಿಕರಲ್ಲಿ 1ನೇ ಡೋಸ್ ಶೇ: 91.45% ಹಾಗೂ 2ನೇ ಡೋಸ್ ಶೇ: 97.79% ವ್ಯಾಕ್ಸಿನೇಷನ್ ಪೂರ್ಣಗೊಂಡಿದ್ದು, 18 ರಿಂದ 44 ವರ್ಷದ ಸಾರ್ವಜನಿಕರಲ್ಲಿ 1ನೇ ಡೋಸ್ ಶೇ: 51.60% ಹಾಗೂ 2ನೇ ಡೋಸ್ ಶೇ: 62.98% ವ್ಯಾಕ್ಸಿನೇಷನ್ ಕಾರ್ಯವು ಪೂರ್ಣಗೊಂಡಿದ್ದು, ಉಳಿದ ಅರ್ಹ ಸಾರ್ವಜನಿಕರು ಲಸಿಕೆಯನ್ನು ಪಡೆಯಲು ಕೋರಲಾಗಿದೆ.

(III) ವಾರ್ಡ್ ವ್ಯಾಪ್ತಿಯಲ್ಲಿ ಡೆಂಗ್ಯೂ ಮತ್ತು ಚಿಕೂನ್ ಗೂನ್ಯ ನಿಯಂತ್ರಣ ಕಾರ್ಯಕ್ರಮದಲ್ಲಿ ಮುಖ್ಯವಾಗಿ ಲಾರ್ವ ಸಮೀಕ್ಷೆ ನಡೆಸಲಾಗಿದ್ದು ಲಾರ್ವ ಕಂಡುಬಂದ ಸ್ಥಳಗಳಲ್ಲಿ ಸ್ವಚ್ಛಪಡಿಸಿ ಲಾರ್ವ ಗಳನ್ನು ನಾಶಪಡಿಸಿ ಸೊಳ್ಳೆಗಳ ಉತ್ಪತ್ತಿ ತಾಣಗಳನ್ನು ನಾಶಪಡಿಸಲು ತಿಳಿಸಿ ಡೆಂಗ್ಯೂ ಮತ್ತು ಚಿಕೂನ್ ಗೂನ್ಯ ನಿಯಂತ್ರಿಸಲು ಮತ್ತು ಸೊಳ್ಳೆಗಳಿಂದ ರಕ್ಷಣೆ ಪಡೆಯಲು ಸೊಳ್ಳೆನಾಶಗಳನ್ನು ಬಳಸಲು ತಿಳಿಸಲಾಯಿತು, ಹಾಗೂ ಮನೆಗಳ ಸುತ್ತ ಮುತ್ತ ಸ್ವಚ್ಛವಾಗಿಟ್ಟು ಸೊಳ್ಳೆಗಳು ಉತ್ಪತ್ತಿಯಾಗದಂತೆ ಮುಂಜಾಗ್ರತೆ ವಹಿಸಲು ಸಾರ್ವಜನಿಕರಲ್ಲಿ ಮನವಿಮಾಡಲಾಯಿತು.

(IV) ಬ್ಲಾಕ್ ಮತ್ತು ಲೇನ್ ಲಸಿಕಾಕರಣ ಕಾರ್ಯಕ್ರಮದಲ್ಲಿ ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು 23 ಬ್ಲಾಕ್ ಗಳಿದ್ದು, ಸದರಿ 6 ಬ್ಲಾಕ್ ಗಳಲ್ಲಿ ಮನೆ ಬೇಟಿ ಸಮೀಕ್ಷಾ ಕಾರ್ಯವನ್ನು ನಡೆಸಿ ಲಸಿಕೆವಂಚಿತರಿಗೆ ಆರೋಗ್ಯ ಶಿಕ್ಷಣ ನೀಡಿ ಅವರ ಮನವೊಲಿಸಿ ಲಸಿಕೆಗಳನ್ನು ನೀಡಲಾಗಿದೆ, ಸದರಿ 4116 ಮನೆಗಳನ್ನು ಮತ್ತು 7276 ಜನಸಂಖ್ಯೆಯನ್ನು ಸಮೀಕ್ಷೆ ಮಾಡಿ 299 ಸಾರ್ವಜನಿಕರಿಗೆ ಇದುವರೆಗೂ ಲಸಿಕೆಯನ್ನು ನೀಡಲಾಗಿದೆ.

2. ಘನತ್ಯಾಜ್ಯ ನಿರ್ವಹಣೆಯ ಬಗ್ಗೆ.

(I) ಗೊಟ್ಟಿಗೆರೆ ಕೆರೆ ಅಕ್ಕಪಕ್ಕದಲ್ಲಿರುವ ವ್ಯಾಪರಸ್ಥರು ತ್ಯಾಜ್ಯವನ್ನು ಕೆರೆಯ ಸುತ್ತ ಮುತ್ತ ಎಸೆಯುತ್ತಿರುವುದು ತಿಳಿದುಬಂದಿದ್ದು, ಸದರಿ ವ್ಯಾಪಾರಸ್ಥರಿಗೆ ನೋಟಿಸ್ ಜಾರಿ ಮಾಡುವ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ) ರವರಿಗೆ ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು ಹಾಗೂ ಸದರಿ ತ್ಯಾಜ್ಯವನ್ನು ಸ್ವಚ್ಛಗೊಳಿಸುವ ಬಗ್ಗೆ ಅಗತ್ಯ ಕ್ರಮ ವಹಿಸಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

(II) ಹೆಚ್.ಎಮ್. ವರ್ಲ್ಡ್ ಸಿಟಿ ಸುತ್ತಮುತ್ತಲಿನ ಘನತ್ಯಾಜ್ಯ ಸ್ವಚ್ಛತೆಗೊಳಿಸಲು ಆರೋಗ್ಯ ಪರಿವೀಕ್ಷಕರಿಗೆ ಈ ವಾರದಲ್ಲಿ Intensive Cleaning ಕಾರ್ಯಕ್ರಮ ಹಮ್ಮಿಕೊಳ್ಳುವುದಾಗಿ ತಿಳಿಸಿದರು.

(III) ಕೃಷ್ಣಪ್ಪ ಬಡಾವಣೆಯಲ್ಲಿ ಕಸ ಸಂಗ್ರಹಣಕ್ಕಾಗಿ ವಾಹನವು ಹೋಗದ ಕಾರಣ, ತ್ಯಾಜ್ಯವನ್ನು ರಸ್ತೆಯಲ್ಲಿಯೇ ಬಿಸಾಡುತ್ತಿರುವುದನ್ನು ತಡೆಗಟ್ಟಲು ಕೋರಲಾಗಿದ್ದು, ಈ ಸಂಬಂಧ ಅಗತ್ಯ ಕ್ರಮ ವಹಿಸಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

(IV) ಬಾಲಾಜಿ ವವಜ್ರ ಅಪಾರ್ಟ್‌ಮೆಂಟ್ ನಲ್ಲಿ ಘನತ್ಯಾಜ್ಯವನ್ನು ದಿನನಿತ್ಯ ಸಂಗ್ರಹಿಸಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

3. ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ಸರಬರಾಜು ಸಂಬಂಧಿಸಿದ ವಿಷಯಗಳ ಬಗ್ಗೆ.

(I) ಗೊಟ್ಟಿಗೆರೆ ಕೆರೆ ಸುತ್ತಲೂ ದುರಸ್ಥಿಗೊಂಡಿರುವ ಬೀದಿ ದೀಪಗಳನ್ನು ಸರಿಪಡಿಸಲು ಸಾರ್ವಜನಿಕರು ಕೋರಿದ್ದು, ಈ ಹಿನ್ನಲೆಯಲ್ಲಿ ಸಂಬಂಧಪಟ್ಟ ಅಧಿಕಾರಿ ರವರಿಗೆ ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.

(II) ಸುರಭಿನಗರದಲ್ಲಿ ವಿದ್ಯುತ್ ಕೇಬಲ್ ಅಳವಡಿಸುವ ಕಾರ್ಯವು ಜಾರಿಯಲ್ಲಿದ್ದು, ಈ ಸಂಬಂಧ ರಸ್ತೆಯಲ್ಲಿ ರಸ್ತೆ ಗುಂಡಿಗಳು ಉಂಟಾಗುತ್ತಿದ್ದು, ಕೂಡಲೇ ವಾರ್ಡ್ ಅಭಿಯಂತರರು ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.

Scanned by CamScanner

4. **ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಂಬಂಧಿಸಿದ ವಿಷಯಗಳ ಬಗ್ಗೆ.**

(I) ರಾಗಿಕನ ಕೆರೆ ಒಳಚರಂಡಿ ನೀರು ಉಕ್ಕಿ ಹರಿಯುತ್ತಿದ್ದು, ಸದರಿ ವಿಷಯದ ಬಗ್ಗೆ ಅಗತ್ಯ ಕ್ರಮ ವಹಿಸಲು ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ರವರಿಗೆ ಸೂಚಿಸಲಾಯಿತು.

(II) ವೀವರ್ಸ್ ಕಾಲೋನಿಯ 4ನೇ ಹಾಗೂ 5ನೇ ಅಡ್ಡ ರಸ್ತೆಯಲ್ಲಿ ಕುಡಿಯುವ ನೀರಿನ ಪೈಪ್ ಲೈನ್ ದುರಸ್ಥಿಗೊಂಡಿದ್ದು, ಈ ಸಂಬಂಧ ಸ್ಥಳೀಯ ನಾಗರೀಕರಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗುತ್ತಿದ್ದು, ಈ ಸಂಬಂಧ ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ರವರಿಗೆ ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.

(III) ಜಂಬುಸವಾರಿದಿನ್ನೆ ಯಲ್ಲಿ ಒಳಚರಂಡಿ ವ್ಯವಸ್ಥೆಯನ್ನು ದುರಸ್ಥಿಪಡಿಸಲು ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ರವರಿಗೆ ಸೂಚಿಸಲಾಯಿತು.

(IV) ಬೋರಾ ಬಡಾವಣೆಯಲ್ಲಿ ಒಳಚರಂಡಿ ಕಾಮಗಾರಿಯಿಂದ ರಸ್ತೆಯ ಮಧ್ಯಭಾಗದಲ್ಲಿ 11 ಕೆ.ವಿ ಕೇಬಲ್ ಸ್ಥಾಪಿಸಿರುವ ಕಾರಣ, ಸದರಿ ಬಡಾವಣೆಯಲ್ಲಿ ಒಳಚರಂಡಿ ವ್ಯವಸ್ಥೆಯನ್ನು ನಿರ್ಮಿಸಲು ಸಂಬಂಧಪಟ್ಟ ಬೆಸ್ಕಾಂ, ಬಿ.ಡಬ್ಲ್ಯೂ.ಎಸ್.ಎಸ್.ಬಿ ಹಾಗೂ ಪಾಲಿಕೆಯ ಅಭಿಯಂತರರು ಜಂಟಿಯಾಗಿ ಸ್ಥಳ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಲಾಯಿತು.

5. ಮಳೆ ನೀರು, ಚರಂಡಿ ಕಾಮಗಾರಿ ಕುರಿತು.

(I) ಹಿಮಗಿರಿ ಮೆಡೋಸ್ ಬಡಾವಣೆಯ ಚರಂಡಿಯನ್ನು ಸ್ವಚ್ಛತೆಗೊಳಿಸಲು ಹಾಗೂ ಡಿಸೆಲ್ಟಿಂಗ್ ಕಾರ್ಯವು ವಾರದಲ್ಲಿಯೇ ಪೂರ್ಣಗೊಳ್ಳುವುದು ಎಂದು ತಿಳಿಸಿದರು.

6. ರಸ್ತೆ ಕಾಮಗಾರಿ ಹಾಗೂ ರಸ್ತೆ ಪಾದಚಾರಿ ಬಗ್ಗೆ.

(I) ವೀವರ್ಸ್ ಕಾಲೋನಿ ಯಿಂದ ಬಿಲವರದಹಳ್ಳಿ ಹೋಗುವ ರಸ್ತೆಯಲ್ಲಿ ಗೂನುಗಳನ್ನು ನಿರ್ಮಾಣ ಮಾಡಲು ಕೋರಲಾಗಿದ್ದು, ಸದರಿ ಕಾರ್ಯವನ್ನು ವಾರ್ಡ್ ಅಭಿಯಂತರರು ಸಂಚಾರಿ ಪೋಲೀಸರೊಂದಿಗೆ ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.

(II) ಐ.ಡಿ.ಬಿ.ಐ ಬಡಾವಣೆಯಲ್ಲಿ ರಸ್ತೆ ನಿರ್ಮಾಣ ಕಾರ್ಯವು ಪೂರ್ಣಗೊಂಡ ನಂತರ, ರಸ್ತೆ ಕುಸಿಯುತ್ತಿರುವುದು ಕಂಡುಬಂದಿರುವ ಬಗ್ಗೆ ಹಾಗೂ ಚರಂಡಿಗಳ ಮೇಲೆ ಸ್ಲ್ಯಾಬ್ ನಿರ್ಮಿಸಲು ಸ್ಥಳೀಯ ನಾಗರೀಕರು ತಿಳಿಸಿರುವ ಸಂಬಂಧ, ಸದರಿ ವಿಷಯದ ಬಗ್ಗೆ ವಾರ್ಡ್ ಅಭಿಯಂತರರು ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.

(III) ಹೆಚ್.ಎಮ್. ವರ್ಲ್ಡ್ ಸಿಟಿ ಸುತ್ತ ಮುತ್ತಲಿನ ರಸ್ತೆಗಳ potholes ಗಳನ್ನು ದುರಸ್ಥಿಪಡಿಸಲು ಕೋರಲಾಗಿದ್ದು, ವಾರ್ಡ್ ಅಭಿಯಂತರರು ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.

7. **ಕೆರೆಗಳು ಸಂಬಂಧಿಸಿದ ವಿಷಯದ ಬಗ್ಗೆ**

(I) ಸುಬ್ಬರಾಯನ ಕೆರೆ ಅಭಿವೃದ್ಧಿ ಪಡಿಸಲು ಸಾರ್ವಜನಿಕರು ಕೋರಿರುವ ಹಿನ್ನೆಲೆಯಲ್ಲಿ, ಸದರಿ ಅಭಿವೃದ್ಧಿ ಕಾರ್ಯದ ಅಗತ್ಯ ಕ್ರಮ ವಹಿಸಿ ವರದಿ ನೀಡಲು ಸಹಾಯಕ ಕಾರ್ಯಪಾಲಕ ಅಭಿಯಂತರರು (ಕೆರೆಗಳು) ರವರಿಗೆ ಸೂಚಿಸಲಾಯಿತು.

**ಈ ಮೇಲೆ ತಿಳಿಸಿರುವ ಎಲ್ಲಾ ವಿಷಯ / ಸಮಸ್ಯೆಗಳ ಬಗ್ಗೆ ನಿಯಮಾನುಸಾರ ಅಗತ್ಯ ಕ್ರಮ ವಹಿಸಲು ಹಾಗೂ ಮುಂದಿನ ಸಭೆಗೆ ಅನುಪಾಲನಾ ವರದಿಯೊಂದಿಗೆ ಸಂಬಂಧಪಟ್ಟ ಅಧಿಕಾರಿಗಳು ಹಾಜರಾಗಲು ಸೂಚಿಸುತ್ತಾ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.**

ಕಾರ್ಯದರ್ಶಿಗಳು
ಹಾಗೂ ಹಿರಿಯ ಆರೋಗ್ಯ ಪರಿವೀಕ್ಷಕರು
ವಾರ್ಡ್ ಸಂಖ್ಯೆ: 194, ಗೊಟ್ಟಿಗೆರೆ.

Scanned by CamScanner

ಪ್ರತಿಯನ್ನು:-

1. ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ರವರ ಅವಗಾಹನೆಗೆ ಸಲ್ಲಿಸಿದೆ.
3. ಉಪ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು (ಬೊಮ್ಮನಹಳ್ಳಿ) ರವರ ಅವಗಾಹನೆಗೆ ಸಲ್ಲಿಸಿದೆ.
5. ಅಧೀಕ್ಷಕ ಅಭಿಯಂತರರು (ಬೊಮ್ಮನಹಳ್ಳಿ) ರವರ ಅವಗಾಹನಗೆ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಬಿಬಿಎಂಪಿ, ಗೊಟ್ಟಿಗೆರೆ ರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, :ಘಋ , ಗೊಟ್ಟಿಗೆರೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸದೆ.
8. ಸಹಾಯಕ ನಿರ್ದೇಶಕರು (ಪಶುಪಾಲನೆ), ಗೊಟ್ಟಿಗೆರೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸದೆ.
9. ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಬೊಮ್ಮನಹಳ್ಳಿ) ವಲಯ ಬಿಬಿಎಂಪಿ.
10. ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ.
11. ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯಗಳು, ಬಿಬಿಎಂಪಿ
12. ಕಾರ್ಯಪಾಲಕ ಅಭಿಯಂತರರು, ಕೆರೆಗಳ ವಿಭಾಗ ಬಿಬಿಎಂಪಿ.
13. ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ ಬಿಬಿಎಂಪಿ.
14. ತೋಟಗಾರಿಕೆ ಅಧೀಕ್ಷಕರು, ಬೊಮ್ಮನಹಳ್ಳಿ ವಲಯ.
15. ಆರೋಗ್ಯ ವೈದ್ಯಾಧಿಕಾರಿಗಳು, ಬೊಮ್ಮನಹಳ್ಳಿ ವಲಯ.
16. ಆರೋಗ್ಯ ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ.
17. ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣಾ ವಿಭಾಗ.
18. ಸಹಾಯಕ ಕಂದಾಯ ಅಧಿಕಾರಿ ಅಂಜನಾಪುರ ವಿಭಾಗ.
19. ಕಲ್ಯಾಣಾಧಿಕಾರಿಗಳು ಬೊಮ್ಮನಹಳ್ಳಿ ವಲಯ.
20. ಉಪವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, ಬೊಮ್ಮನಹಳ್ಳಿ ವಲಯ.
21. ಪೋಲೀಸ್ ಇನ್ಸ್‌ಪೆಕ್ಟರ್, ಹುಳಿಮಾವು ಮತ್ತು ಕೋಣನಕುಂಟೆ ಪೋಲೀಸ್ ಠಾಣೆ.
22. ಕಂದಾಯ ಅಧಿಕಾರಿಗಳು, ಅಂಜನಾಪುರ ಉಪ ವಲಯ.
23. ಸ್ಥಳೀಯ ನಾಗರಿಕ ಕಲ್ಯಾಣ ಸಂಸ್ಥೆಗಳು.

Scanned by CamScanner